# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 67(ಹಳೆಯ ಸಂಖ್ಯೆ-19), ಸಂಜಯನಗರ. ಬೆಂಗಳೂರು.

ಸಂಖ್ಯೆ: ಸ.ಅ/ವಾ-67(ಹಳೆಯ ಸಂಖ್ಯೆ-19)/ಪಿ.ಆರ್/08 /2022-23 ದಿನಾಂಕ:-20-08-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ:-21-09-2020. ರವರ ಆದೇಶದಂತೆ ದಿನಾಂಕ:-20-08-2022 ರಂದು ವಾರ್ಡ್ ನಂ: 67(ಹಳೆಯ ಸಂಖ್ಯೆ-19) ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

::ಸಭೆಗೆ ಹಾಜರಾಗಿದ್ದವರ ವಿವರಗಳು::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಷರಾ |
|---|---|---|---|
| 1. | ಶ್ರೀಮತಿ. ಜ್ಯೋತಿ.ಜಿ ಚೌಳೂಲ್ಕರ್ ಸ.ಕಾ.ನಿ (ಘ.ತ್ಯಾ.ನಿ) ಪುಲಿಕೇಶಿ ನಗರ ವಿಭಾಗ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | |
| 2. | ಶ್ರೀ. ನವನಾಥ್ | ಸದಸ್ಯ ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು ವಾರ್ಡ್ ನಂ: 67(ಹಳೆಯ ಸಂಖ್ಯೆ-19) | |
| 3. | ಶ್ರೀ. ಸಲ್ಮಾನ್ | ಹಿರಿಯ ಆರೋಗ್ಯ ಪರಿವೀಕ್ಷಕರು. | |
| 4. | ವಾಟರ್ ಇನ್ಸ್‌ಪೆಕ್ಟರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಜಯನಗರ | |
| 5. | ತೋಟಗಾರಿಕಾ ಇನ್ಸ್‌ಪೆಕ್ಟರ್ | ತೋಟಗಾರಿಕಾ ಇಲಾಖೆ. | |
| 6. | ಪೊಲೀಸ್ ಅಧಿಕಾರಿಗಳು | ಸಂಜಯನಗರ ಪೊಲೀಸ್ ಠಾಣೆ | |
| 7. | ಸಂಚಾರಿ ಪೊಲೀಸ್ ಅಧಿಕಾರಿಗಳು | ಸಂಚಾರಿ ಪೊಲೀಸ್ ಠಾಣೆ, ಆರ್.ಟಿ ನಗರ. | |
| 8. | ಬೀದಿ ದೀಪ ನಿರ್ವಾಹಕರು | Street light Incharge, B B M P. | |
| 9. | ಶ್ರೀ. ಪ್ರಕಾಶ್, ಮಾರುತಿ ರಾವ್ ಮತ್ತು ಇತರರು | ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು | |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ.ನವನಾಥ್, ಸಹಾಯಕ ಅಭಿಯಂತರರು ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀಮತಿ ಜ್ಯೋತಿ.ಜಿ ಚೋಳೂಲ್ಕರ್ ರವರಿಗೆ ಮತ್ತು ಸಭೆಯಲ್ಲಿ ಸೇರಿದ ಸಾರ್ವಜನಿಕರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಸಂಜಯನಗರದಲ್ಲಿ ಬರುವ 60 ಅಡಿ ರಸ್ತೆ, ವಿನಾಯಕ ಬಡಾವಣೆ, ಮತ್ತು 1ನೇ ಎ 4ನೇ ಕ್ರಾಸ್, ಸೆಂಟ್ರಲ್ ಎಕ್ಸೈಜ್ ಲೇಔಟ್‌ಗಳಲ್ಲಿ ಮರದ ರೆಂಬೆ ಕೊಂಬೆಗಳು ಜೊತು ಬಿದ್ದಿದ್ದು, ಅವುಗಳನ್ನು ತೆರವುಗೊಳಿಸುವಂತೆ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.
2. ಉಡುಪಿ ಗಾರ್ಡನ್ ಮುಂಭಾಗದಲ್ಲಿ ವಾಟರ್ ಪೈಪ್‌ಲೈನ್ ಒಡೆದು ನೀರು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಾರ್ವಜನಿಕರು ತಿಳಿಸಿದರು ಇದನ್ನು ತಕ್ಷಣದಲ್ಲೆ ಸರಿಪಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
3. ಡೆಫೋಡಿಯಲ್ ಸ್ಕೂಲ್‌ನಿಂದ 60 ಅಡಿ ರಸ್ತೆಯನ್ನು ಕೂಡುವ ರಸ್ತೆಯು ಸೀವರ್ ಲೈನ್ ಅಳವಡಿಸುವಾಗ ಹಾಳಾಗಿರುತ್ತದೆ. ಸದರಿ ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿ ರವರು ಸರಿಪಡಿಸಬೇಕಾಗಿ ನೋಡಲ್ ಅಧಿಕಾರಿಗಳು ಸೂಚಿಸಿದರು ಹಾಗೂ 1ನೇ ಎ ಕ್ರಾಸ್, ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ಮ್ಯಾನ್‌ಹೋಲ್‌ಗಳು ಕೊನೆಯಭಾಗದಲ್ಲಿ ಹಾಳಾಗಿರುತ್ತವೆಂದು ಮಾರುತಿರಾವ್ ರವರು ತಿಳಿಸಿರುತ್ತಾರೆ. ಸದರಿ ಮ್ಯಾನ್‌ಹೋಲ್‌ಗಳನ್ನು ಸರಿಪಡಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

Scanned with CamScanner

4. ಸಂಜಯನಗರದಲ್ಲಿ ಬರುವ ಉದ್ಯಾನವನದಲ್ಲಿ ಜಿಮ್ ಉಪಕರಣಗಳು ಮತ್ತು ಮಕ್ಕಳು ಆಟ ಆಡುವ ಉಪಕರಣಗಳು ಹಾಳಾಗಿರುವುದಾಗಿ ಸಾರ್ವಜನಿಕರು ತಿಳಿಸಿರುತ್ತಾರೆ. ಇದಕ್ಕೆ ವೆಂಕಟೇಶ್ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ವಾರ್ಡ್‌ನಲ್ಲಿ ಬರುವ ಎಲ್ಲಾ ಪಾರ್ಕ್‌ಗಳಲ್ಲಿ ಹಾಳಾಗಿರುವ ಉಪಕರಣಗಳ ಪಟ್ಟಿಯನ್ನು ಮಾಡಿ ಸರಿಪಡಿಸಲು ಬಿ.ಬಿ.ಎಂ.ಪಿ ಯೋಜನಾ ವಿಭಾಗಕ್ಕೆ ಪಟ್ಟಿಯನ್ನು ಸಲ್ಲಿಸುತ್ತಿರುವುದಾಗಿ ತಿಳಿಸಿರುತ್ತಾರೆ.
5. ವಿನಾಯಕನ ಲೇಔಟ್ ಮತ್ತು ಸೆಂಟ್ರಲ್ ಎಕ್ಸೈಜ್ ಲೇಔಟ್ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡಬೇಕಾಗಿ ಸಾರ್ವಜನಿಕರು ಕೋರಿದರು. ಸದರಿ ಪಾರ್ಕ್‌ಗಳ ನಿರ್ವಹಣೆಯ ಬಗ್ಗೆ ಕಾಳಜಿವಹಿಸಬೇಕಾಗಿ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
6. ಸಂಜಯನಗರ ಮುಖ್ಯರಸ್ತೆಯಲ್ಲಿ ಬರುವ ಮ್ಯಾನ್‌ಹೋಲ್‌ಗಳನ್ನು ಕಾಲಕಾಲಕ್ಕೆ ಡಿ ಸಿಲ್ಟಿಂಗ್ ಮಾಡಬೇಕಾಗಿ ಸಾರ್ವಜನಿಕರು ಕೋರಿದರು. ಅದರಂತೆ ಕ್ರಮ ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
7. ವಿದ್ಯಾಸಾಗರ ಸ್ಕೂಲ್‌ನ ಹತ್ತಿರ ಶಾಲೆ ಪ್ರಾರಂಭದ ಮತ್ತು ಮುಗಿಯುವ ಸಮಯದಲ್ಲಿ ಪಾರ್ಕಿಂಗ್ ಸಮಸ್ಯೆ ಉಂಟಾಗಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದರು. ಸದರಿ ಸಮಸ್ಯೆಯ ಬಗ್ಗೆ ಗಮನಹರಿಸಲು ಟ್ರಾಫಿಕ್ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
8. ಸಂಜಯನಗರ ವಾರ್ಡ್‌ನ ಮುಖ್ಯರಸ್ತೆ, ಭೂಪಸಂದ್ರ ಮುಖ್ಯರಸ್ತೆ ಮತ್ತು ಪಾದಚಾರಿ ಮಾರ್ಗದ ಒತ್ತುವರಿಯಾಗಿರುವುದರಿಂದ ಸಂಚಾರ ಸಮಸ್ಯೆಯಾಗುತ್ತಿದ್ದು, ಪಾದಚಾರಿ ಮಾರ್ಗಗಳ ಒತ್ತುವರಿಯನ್ನು ತೆರವುಗೊಳಿಸಲು ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಕೋರಿರುತ್ತಾರೆ. ಅದರಂತೆ ಸಂಚಾರಿ ಪೊಲೀಸ್ ವಿಭಾಗದವರು ಒತ್ತುವರಿಯನ್ನು ತೆರವುಗೊಳಿಸಿ ಸಂಚಾರ ಸಮಸ್ಯೆಯನ್ನು ಬಗೆಹರಿಸಲು ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.

ವಾರ್ಡ್‌ನ ಅಧ್ಯಕ್ಷರು ಮಾತನಾಡುತ್ತಾ ಈ ಮೇಲಿನ ಎಲ್ಲಾ ಅಂಶಗಳನ್ನು ಕೂಡಲೇ ಬಗೆಹರಿಸುವಂತೆ ವಾರ್ಡ್ ಕಾರ್ಯದರ್ಶಿಗಳಿಗೆ ತಿಳಿಸುತ್ತಾ ಮತ್ತು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರಿಗೆ ವಂದನೆಗಳನ್ನು ತಿಳಿಸುತ್ತಾ ಈ ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸದಸ್ಯ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-67(ಹಳೆಯ ಸಂಖ್ಯೆ-19),
ಸಂಜಯನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-67(ಹಳೆಯ ಸಂಖ್ಯೆ-19),
ಸಂಜಯನಗರ

**ಪ್ರತಿಯನ್ನು:-**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.

Scanned with CamScanner